# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 528

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ.ಕೆ.ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.12.2022

ಉತ್ತರಿಸುವ ಸಚಿವರು : ಮುಖ್ಯಮಂತ್ರಿ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಆಹಾರ ಇಲಾಖೆಯ ಅಧಿಕಾರಿಗಳು ಹಫ್ತಾ ವಸೂಲಿ ಮಾಡುತ್ತಿರುವ ಆರೋಪದ ಬಗ್ಗೆ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ. |
| ಆ | ನ್ಯಾಯ ಬೆಲೆ ಅಂಗಡಿಗಳಲ್ಲಿ ನಡೆಯುವ ಅಳತೆ ತೂಕದ ವಿಚಾರದಲ್ಲಿ ದಾಖಲಾಗುವ ದೂರುಗಳ ವಿರುದ್ಧ ಕ್ರಮ ಕೈಗೊಳ್ಳದಿರಲು ಹಣ ವಸೂಲಿ ಮಾಡುತ್ತಿದ್ದು, ಹಣ ನೀಡದ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಸುಳ್ಳು ದೂರು ದಾಖಲಿಸಿ ಕಿರುಕುಳ ನೀಡಲಾಗುತ್ತಿದೆ; ಈ ವ್ಯವಹಾರದ ಬಗ್ಗೆ ಸರ್ಕಾರದ ನಿಲುವೇನು; | ಆಹಾರ ಇಲಾಖೆಯ ಅಧಿಕಾರಿಗಳು ನ್ಯಾಯ ಬೆಲೆ ಅಂಗಡಿ ಮಾಲೀಕರಿಂದ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. ಈ ಬಗ್ಗೆ ದೂರುಗಳು ದಾಖಲಿಸಿದಲ್ಲಿ ಅಂತಹ ಅಧಿಕಾರಿ/ನೌಕರರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಕ್ರಮ ವಹಿಸಲಾಗುವುದು. |
| ಇ | ಈ ವ್ಯವಸ್ಥೆಯಲ್ಲಿ ಬದಲಾವಣೆ ತರಲು ಸರ್ಕಾರ ಕೈಗೊಂಡಿರುವ ದೀರ್ಘಾವಧಿ ಕ್ರಮಗಳೇನು? (ವಿವರಗಳನ್ನು ನೀಡುವುದು) | ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಅಂತ್ಯೋದಯ ಅನ್ನ, ಆದ್ಯತಾ ಮತ್ತು ಆದ್ಯತೇತರ ಪಡಿತರ ಚೀಟಿಗಳ ಪಡಿತರ ಫಲಾನುಭವಿಗಳಿಗೆ ವಿತರಿಸಲಾಗುತ್ತಿರುವ ಆಹಾರ ಧಾನ್ಯದ ಸಂಪೂರ್ಣ ಮಾಹಿತಿಯನ್ನು ಗಣಕೀಕರಣಗೊಳಿಸಲಾಗಿದೆ. ಪಡಿತರ ಫಲಾನುಭವಿಗಳ ಬಯೋಮೆಟ್ರಿಕ್ ಖಾತರಿಯನ್ನು ಪಡೆದು ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದೆ. ಇದರಿಂದಾಗಿ ಆಹಾರ ಧಾನ್ಯಗಳ ದುರುಪಯೋಗಪಡಿಸಿಕೊಳ್ಳುವ ಸಾಧ್ಯತೆ ಇರುವುದಿಲ್ಲ. ಇದರೊಂದಿಗೆ ಪಡಿತರ ವಿತರಣೆ, ಪಡಿತರ ಚೀಟಿಯಲ್ಲಿನ ತಿದ್ದುಪಡಿ, ಹೆಸರು ಸೇರಿಸುವುದು, ಹೆಸರು ತೆಗೆಯುವುದು, ಪಡಿತರ ಚೀಟಿಯ ವರ್ಗಾವಣೆ, ಆಧಾರ್ ಸಂಖ್ಯೆ ಜೋಡಣೆ, ಆಧಾರ್ ಬಯೋ ಮೆಟ್ರಿಕ್ ದೃಢೀಕರಣ, ಬದಲಿ ಪಡಿತರ ಚೀಟಿ ವಿತರಣೆ ಕಾರ್ಯಗಳನ್ನು ಸಂಪೂರ್ಣವಾಗಿ ಆನ್‌ಲೈನ್ ಮೂಲಕ ನಿರ್ವಹಿಸಲಾಗುತ್ತಿದೆ. |

ಆನಾಸ 211 ಆಇಸೇ 2022 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ